ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 22-04-2017

# ಪತ್ರಿಕಾ ಆಮಂತ್ರಣ

1. "47ನೇ ಅಖಿಲ ಭಾರತ ಸುಸಂಘಟಿತ ಜೋಳ ಸಂಶೋಧನಾ ಗುಂಪು ಸಭೆ"

ಉದ್ಘಾಟನೆ:

ಕೃಷ್ಣ ಬೈರೇಗೌಡ, ಕೃಷಿ ಸಚಿವರು.

ಮುಖ್ಯ ಅತಿಥಿ:

ಡಾ ಡೇವಿಡ್ ಬರ್ಗ್‌ವಿನ್ಸನ್, ಮಹಾ ನಿರ್ದೇಶಕರು, ಭಾರತೀಯ ಕೃಷಿ ಅನುಸಂಧಾನ ಪರಿಷತ್, ಹೈದರಾಬಾದ್.

ಡಾ. ಜೆ.ಎಸ್.ಸಂಧು, ಉಪ ಮಹಾ ನಿರ್ದೇಶಕರು, ಭಾರತೀಯ ಕೃಷಿ ಅನುಸಂಧಾನ ಪರಿಷತ್, ನವದೆಹಲಿ.

ಡಾ. ಐ.ಎಸ್. ಸೋಲಾಂಕಿ, ಸಹಾಯಕ ಮಹಾನಿರ್ದೇಶಕರು ಭಾರತೀಯ ಕೃಷಿ ಅನುಸಂಧಾನ ಪರಿಷತ್, ನವದೆಹಲಿ.

ಅಧ್ಯಕ್ಷತೆ:

ಡಾ. ಹೆಚ್. ಶಿವಣ್ಣ, ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು.
ದಿನಾಂಕ: **23-04-2017**, ಭಾನುವಾರ, ಬೆಳಿಗ್ಗೆ **9.30** ಗಂಟೆಗೆ.
ಸ್ಥಳ: ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತರರಾಷ್ಟ್ರೀಯ ಸಭಾಂಗಣ, ಗಾಂಧಿ ಕೃಷಿ ವಿಜ್ಞಾನ ಕೇಂದ್ರ, (ಜಿ.ಕೆ.ವಿ.ಕೆ). ಬೆಂಗಳೂರು.

ಸೂಚನೆ: ಈ ಕಾರ್ಯಕ್ರಮಕ್ಕೆ ಮಾಧ್ಯಮ ಪ್ರತಿನಿಧಿಗಳನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ಬೆಳಿಗ್ಗೆ **9.00** ಗಂಟೆಗೆ ನಗರದ ಕಬ್ಬನ್ ಉದ್ಯಾನವನದಲ್ಲಿರುವ ಪ್ರೆಸ್‌ಕ್ಲಬ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.

2. ವಿಶ್ವ ಪುಸ್ತಕ ಮತ್ತು ಕೃತಿಸ್ವಾಮ್ಯ ದಿನಾಚರಣೆ ಹಾಗೂ ರಾಜ್ಯ ಕೇಂದ್ರ ಗ್ರಂಥಾಲಯದ ನವೀಕೃತ ಕಟ್ಟಡದ ಉದ್ಘಾಟನಾ ಸಮಾರಂಭ:

ಉದ್ಘಾಟನೆ:

ತನ್ವೀರ್ ಸೇಠ್, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ಔಕಾಫ್ ಸಚಿವರು,

ಅಂತರ್ಜಾಲ ಕೇಂದ್ರ ಉದ್ಘಾಟನೆ:

ಕೆ.ಜೆ. ಜಾರ್ಜ್, ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು

ಪುಸ್ತಕ ಪ್ರದರ್ಶನ ಉದ್ಘಾಟನೆ:

ರಾಮಲಿಂಗಾರೆಡ್ಡಿ, ಸಾರಿಗೆ ಸಚಿವರು

ಇ–ಗ್ರಂಥಸೂಚಿ ಸಿಡಿ ಬಿಡುಗಡೆ:
ಎಂ. ಕೃಷ್ಣಪ್ಪ, ವಸತಿ ಸಚಿವರು

ಶತಮಾನೋತ್ಸವ ಗೀತೆಯ ಸಿ.ಡಿ. ಬಿಡುಗಡೆ:

ಕೃಷ್ಣ ಬೈರೇಗೌಡ, ಕೃಷಿ ಸಚಿವರು.

ದಿನಾಂಕ: 23–04–2017, ಭಾನುವಾರ, ಬೆಳಿಗ್ಗೆ 11.00 ಗಂಟೆಗೆ.

ಸ್ಥಳ: ರಾಜ್ಯ ಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ, ಬೆಂಗಳೂರು.

3. ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ 51ನೇ ಘಟಿಕೋತ್ಸವ ಸಮಾರಂಭ:

ಅಧ್ಯಕ್ಷತೆ:

ವಜುಭಾಯಿ ವಾಲ, ರಾಜ್ಯಪಾಲರು ಹಾಗೂ ಕೃಷಿ ವಿಶ್ವ ವಿದ್ಯಾನಿಲಯದ ಕುಲಾಧಿಪತಿಗಳು.

ಮುಖ್ಯ ಅತಿಥಿ ಹಾಗೂ ಘಟಿಕೋತ್ಸವ ಭಾಷಣ:

ಡಾ. ತ್ರೀಲೋಚನ ಮೋಹಪಾತ್ರ, ಕಾರ್ಯದರ್ಶಿಗಳು,
ಕೃಷಿ ಸಂಶೋಧನೆ ಮತ್ತು ಶಿಕ್ಷಣ ಹಾಗೂ ಮಹಾ ನಿರ್ದೇಶಕರು, ಭಾರತೀಯ ಅನುಸಂಧಾನ ಪರಿಷತ್ತು, ಕೃಷಿ ಮತ್ತು ರೈತರ ಕಲ್ಯಾಣ ಮಂತ್ರಾಲಯದ, ಭಾರತ ಸರ್ಕಾರ, ನವದೆಹಲಿ.

ಉಪಸ್ಥಿತಿ:

ಕೃಷ್ಣ ಬೈರೇಗೌಡ, ಕೃಷಿ ಸಚಿವರು ಹಾಗೂ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಸಹ ಕುಲಾಧಿಪತಿ

ದಿನಾಂಕ: 24-04-2017 ಸೋಮವಾರ, ಸಮಯ: ಬೆಳಿಗ್ಗೆ 11-00 ಗಂಟೆಗೆ

ಸ್ಥಳ: ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತರರಾಷ್ಟ್ರೀಯ ಸಭಾಂಗಣ, ಗಾಂಧಿ ಕೃಷಿ ವಿಜ್ಞಾನ ಕೇಂದ್ರ, (ಜಿ.ಕೆ.ವಿ.ಕೆ). ಬೆಂಗಳೂರು.

ಸೂಚನೆ: ಈ ಕಾರ್ಯಕ್ರಮಕ್ಕೆ ಮಾಧ್ಯಮ ಪ್ರತಿನಿಧಿಗಳನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ಬೆಳಿಗ್ಗೆ 10.00 ಗಂಟೆಗೆ ನಗರದ ಕಬ್ಬನ್ ಉದ್ಯಾನವನದಲ್ಲಿರುವ ಪ್ರೆಸ್‌ಕ್ಲಬ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ. ಸಂಪರ್ಕ: ಡಾ. ಕೆ. ಶಿವರಾಮು - 9972035456

4. ಭಾರತದ ಖಾದಿ ಮತ್ತು ಗ್ರಾಮೋದ್ಯೋಗ ವಸ್ತು ಪ್ರದರ್ಶನ ಖಾದಿ ಉತ್ಸವ - 2017

ವಸ್ತು ಪ್ರದರ್ಶನ ಉದ್ಘಾಟನೆ:

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

ಅಧ್ಯಕ್ಷತೆ:

ದಿನೇಶ್ ಗುಂಡೂರಾವ್, ಶಾಸಕರು, ಗಾಂಧಿನಗರ ಕ್ಷೇತ್ರ.

ಮಳಿಗೆಗಳ ಉದ್ಘಾಟನೆ:

ರಮೇಶ್ ಲ. ಜಾರಕಿಹೊಳಿ, ಸಣ್ಣ ಕೈಗಾರಿಕೆ ಸಚಿವರು.

ಪ್ರಾತ್ಯಕ್ಷಿಕೆ ಉದ್ಘಾಟನೆ;

ಕೆ.ಜೆ. ಜಾರ್ಜ್, ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಹಾಗೂ ಬೆಂಗಳೂರು ಜಿಲ್ಲಾ ಉಸ್ತುವಾರಿ ಸಚಿವರು.

ಥೀಮ್ ಪೆವಿಲಿಯನ್ ಉದ್ಘಾಟನೆ:

ಯಲುವಹಳ್ಳಿ ಎನ್. ರಮೇಶ್,
ಅಧ್ಯಕ್ಷರು, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ,
ಬೆಂಗಳೂರು.

ದಿನಾಂಕ : 24-04-2017 ಸೋಮವಾರ, ಸಮಯ: ಸಂಜೆ 4-00 ಗಂಟೆಗೆ

ಸ್ಥಳ: ಸ್ವಾತಂತ್ರ್ಯ ಉದ್ಯಾನವನ, ಪೀಪಲ್ ಪ್ಲಾಜಾ, ಗಾಂಧಿನಗರ,
ಬೆಂಗಳೂರು – 560 009.

5. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಚಲನಚಿತ್ರ ಅಕಾಡೆಮಿ ವತಿಯಿಂದ ಡಾ. ರಾಜ್‌ಕುಮಾರ್ 89ನೇ ಜನ್ಮ ದಿನಾಚರಣೆ:

ಉದ್ಘಾಟನೆ:
ಶ್ರೀಮತಿ ಲಕ್ಷ್ಮೀ, ಖ್ಯಾತ ಕಲಾವಿದರು

ಅಧ್ಯಕ್ಷತೆ:
ಆರ್. ವಿ. ದೇವರಾಜ್, ವಿಧಾನಸಭಾ ಸದಸ್ಯರು.

ಪ್ರಧಾನ ಭಾಷಣ:
ಬರಗೂ ರಾಮಚಂದ್ರಪ್ಪ, ಸಾಹಿತಿಗಳು ಮತ್ತು ಚಿಂತಕರು

ಮುಖ್ಯ ಅತಿಥಿಗಳು:

ಅನಂತಕುಮಾರ್,
ರಾಸಾಯನಿಕ ಮತ್ತು ರಸಗೊಬ್ಬರ ಕೇಂದ್ರ ಸಚಿವರು ಹಾಗೂ ಸಂಸದರು,
ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರ.

ಕೆ.ಜೆ. ಜಾರ್ಜ್, ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರು.

ದಿನಾಂಕ: 24-04-2017, ಸೋಮವಾರ ಸಮಯ : ಬೆಳಿಗ್ಗೆ 11.00 ಗಂಟೆಗೆ.

ಸ್ಥಳ: ರವೀಂದ್ರ ಕಲಾಕ್ಷೇತ್ರ, ಬೆಂಗಳೂರು.

6. "ರಾಜ್ಯ ಮಹಿಳಾ ಸಬಲೀಕರಣ ಕಾರ್ಯನೀತಿ -2017" ಕರಡಿನ ಕುರಿತು ಚರ್ಚಿಸಲು ರಾಜ್ಯಮಟ್ಟದ ಸಭೆ

ಅಧ್ಯಕ್ಷತೆ:

ಶ್ರೀಮತಿ ಉಮಾಶ್ರೀ,
ಕನ್ನಡ ಸಂಸ್ಕೃತಿ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು
ದಿನಾಂಕ: 24-04-2017, ಸೋಮವಾರ ಸಮಯ : ಬೆಳಿಗ್ಗೆ 11.00 ಗಂಟೆಗೆ.
ಸ್ಥಳ: .ಕೊಠಡಿ ಸಂಖ್ಯೆ 419, ವಿಕಾಸಸೌಧ. ಬೆಂಗಳೂರು.

7. "ರಾಷ್ಟ್ರೀಯ ಸಾವಯವ ಮೇಳ -2017" ಕುರಿತಂತೆ ಪತ್ರಿಕಾಗೋಷ್ಠಿ:

ಕೃಷ್ಣಬೈರೇಗೌಡ,
ಕೃಷಿ ಸಚಿವರು.
ದಿನಾಂಕ: 24-04-2017, ಸೋಮವಾರ, ಸಮಯ : ಮಧ್ಯಾಹ್ನ 2.00 ಗಂಟೆಗೆ
ಸ್ಥಳ: ಕೊಠಡಿ ಸಂಖ್ಯೆ 123, 1ನೇ ಮಹಡಿ, ವಿಕಾಸಸೌಧ, ಬೆಂಗಳೂರು.

8. ವಾರ್ಷಿಕ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭ.

**<u>ಉದ್ಘಾಟನೆ:</u>**

**ಸಿದ್ದರಾಮಯ್ಯ,**

**ಮುಖ್ಯಮಂತ್ರಿಗಳು,**

**<u>ಅಧ್ಯಕ್ಷತೆ:</u>**

**ಆರ್ ರೋಷನ್ ಬೇಗ್,**

**ನಗರಾಭಿವೃದ್ಧಿ ಮತ್ತು ಹಜ್ ಸಚಿವರು.**

**ದಿನಾಂಕ: 24–04–2017, ಸೋಮವಾರ ಸಮಯ : ಸಂಜೆ 6..00 ಗಂಟೆಗೆ**

**ಸ್ಥಳ: ಡಾ. ಬಿ.ಆರ್. ಅಂಬೇಡ್ಕರ್ ಭವನ, ವಸಂತನಗರ, ಬೆಂಗಳೂರು.**

<u>ಪತ್ರಿಕಾ ಪ್ರಕಟಣೆ</u>

## ಪಂಚಾಯತ್ ರಾಜ್ ವಲಯದಲ್ಲಿ ತಂತ್ರಜ್ಞಾನದ ಸಮರ್ಥ ಬಳಕೆ: ರಾಜ್ಯಕ್ಕೆ ಸತತ ಮೂರನೇ ಬಾರಿಗೆ ಇ- ಪುರಸ್ಕಾರ್

ಮೈಸೂರು 22- ಪಂಚಾಯತ್ ರಾಜ್ ವಲಯದಲ್ಲಿ ಮಾಹಿತಿ ಮತ್ತು ಸಂವಹನ ತಂತ್ರಜ್ಞಾನದ ಸಮರ್ಥ ಬಳಕೆಗಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ರಾಷ್ಟ್ರೀಯ ಇ-ಪುರಸ್ಕಾರ್ ಮೊದಲ ಬಹುಮಾನಕ್ಕೆ ಆಯ್ಕೆಯಾಗಿದೆ.
ಸತತ ಮೂರು ವರ್ಷಗಳಿಂದ ಕರ್ನಾಟಕದ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಈ ಪ್ರಶಸ್ತಿ ಪಡೆಯುತ್ತಿದ್ದು, ಹ್ಯಾಟ್ರಿಕ್ ಸಾಧಿಸಿದೆ.

ಮಾಹಿತಿ ಮತ್ತು ಸಂಪರ್ಕ ತಂತ್ರಜ್ಞಾನದ ಮೂಲಕ ಪಂಚಾಯಿತಿಗಳ ಕಾರ್ಯ ನಿರ್ವಹಣೆಯಲ್ಲಿ ಪಾರದರ್ಶಕತೆ, ದಕ್ಷತೆ ಮತ್ತು ಹೊಣೆಗಾರಿಕೆಗಳನ್ನು ಸಾಧಿಸುವಲ್ಲಿ ಮಾಡಿರುವ ಉನ್ನತ ಪ್ರಯತ್ನಗಳನ್ನು ಗುರುತಿಸಿ, ವಾಷರ್ಿಕ ಇ-ಪುರಸ್ಕಾರ್ ನೀಡುವ ಕೇಂದ್ರ ಸರ್ಕಾರದ ಪ್ರಶಸ್ತಿಗೆ ಕರ್ನಾಟಕ ಮೊದಲ ಬಹುಮಾನ ಪಡೆದಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಎಚ್.ಕೆ. ಪಾಟೀಲ ಇಂದು ಮೈಸೂರಿನ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯಲ್ಲಿ ಮಾಧ್ಯಮ ಗೋಷ್ಠಿಯಲ್ಲಿ ತಿಳಿಸಿದರು.
ಈ ಬಹುಮಾನವನ್ನು ಏಪ್ರಿಲ್ 24 ರಂದು ಉತ್ತರ ಪ್ರದೇಶದ ರಾಜಧಾನಿ ಲಖನೌದಲ್ಲಿ ನಡೆಯಲಿರುವ ರಾಷ್ಟ್ರೀಯ ಪಂಚಾಯತ್ ರಾಜ್ ದಿವಸ್

ಆಚರಣೆಯ ಸಮಾರಂಭದಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಕನರ್ಾಟಕದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಎಚ್.ಕೆ. ಪಾಟೀಲರವರಿಗೆ ಪ್ರದಾನ ಮಾಡುವರು.

ಪಂಚಾಯಿತಿಗಳಿಗೆ ಮಾಹಿತಿ ಮತ್ತು ಸಂಪರ್ಕ ತಂತ್ರಜ್ಞಾನದ ಮೂಲಕ ಪಂಚಾಯಿತಿಗಳ ಕಾರ್ಯ ನಿರ್ವಹಣೆಯಲ್ಲಿ ಪಾರದರ್ಶಕತೆ, ದಕ್ಷತೆ ಮತ್ತು ಹೊಣೆಗಾರಿಕೆಗಳನ್ನು ಸಾಧಿಸುವಲ್ಲಿ ಕನರ್ಾಟಕದ ತಂತ್ರಾಂಶವನ್ನು ಅತ್ಯುನ್ನತ ಎಂದು ಕೇಂದ್ರ ಸರ್ಕಾರ ಘೋಷಿಸಿದೆ.

ಕರ್ನಾಟಕ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಅಭಿವೃದ್ಧಿಪಡಿಸಿ ಕಳೆದ 3 ವರ್ಷಗಳಿಂದ ಅನುಷ್ಠಾನಗೊಳಿಸುತ್ತಿರುವ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ಮಹತ್ವ ಪೂರ್ಣವಾದ ಕಾರ್ಯತತ್ಪರತೆ ಮತ್ತು ದಕ್ಷತೆಗೆ ಕೇಂದ್ರ ಸರ್ಕಾರ ಮಾನ್ಯತೆ ನೀಡಿದೆ. ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಆರೋಹಣ ಮಾಡದೇ ಈಗ ಯಾವುದೇ ಬಿಲ್ಲುಗಳು ಪಾವತಿಯಾಗದ ವ್ಯವಸ್ಥೆ ಸೃಷ್ಟಿ ಮಾಡಿರುವುದರಿಂದ ಕನರ್ಾಟಕ ಸಕರ್ಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅತ್ಯಂತ ಹೆಚ್ಚು ಪಾರದರ್ಶಕ ವ್ಯವಸ್ಥೆಯನ್ನು ಹೊಂದಿರುವುದನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗಿದೆ ಎಂದು ಸಚಿವರು ಕೇಂದ್ರ ಸಕರ್ಾರದ ಮೆಚ್ಚುಗೆಯ ಮಾತುಗಳಿಗೆ ಅಭಿನಂದನೆ ಸಲ್ಲಿಸಿದರು.

## ಏಪ್ರಿಲ್ 23 ರಂದು

## ನಗರ ಕೇಂದ್ರ ಗ್ರಂಥಾಲಯದ ನವೀಕೃತ ಕಟ್ಟಡದ ಉದ್ಘಾಟನೆ

ಬೆಂಗಳೂರು, ಏಪ್ರಿಲ್ 22. (ಕರ್ನಾಟಕ ವಾರ್ತೆ)

ನಗರದ ಕಬ್ಬನ್ ಉದ್ಯಾನವನದಲ್ಲಿರುವ ನಗರ ಕೇಂದ್ರದ ಗ್ರಂಥಾಲಯದ ನವೀಕೃತ ನೂತನ ಕಟ್ಟಡದ ಉದ್ಘಾಟನೆಯು ಏಪ್ರಿಲ್ 23 ರಂದು ಭಾನುವಾರ ಬೆಳಿಗ್ಗೆ 11.00 ಗಂಟೆಗೆ ರಾಜ್ಯ ಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿ ನೆರವೇರಲಿದೆ.

ಈ ಸಮಾರಂಭದ ಉದ್ಘಾಟನೆಯನ್ನು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ತನ್ವೀರ್ ಸೇಠ್ ಅವರು ನೆರವೇರಿಸಲಿದ್ದಾರೆ.

ರಾಜ್ಯ ಕೇಂದ್ರ ಗ್ರಂಥಾಲಯವು ಐತಿಹಾಸಿಕವಾದ ಸರ್. ಶೇಷಾದ್ರಿ ಅಯ್ಯರ್ ಭವನದಲ್ಲಿದೆ. ಈ ಭವನವು ಸುಂದರವಾದ ಹಚ್ಚ ಹಸಿರಿನ ಕಬ್ಬನ್ ಉದ್ಯಾನದಲ್ಲಿದ್ದು

ಇದೊಂದು ಅತ್ಯಂತ ಪುರಾತನ ಹಾಗೂ ಪ್ರಾಮುಖ್ಯತೆ ಪಡೆದ ಭವನವಾಗಿದೆ. ಈ ಗ್ರಂಥಾಲಯ ದಿವಾನ್ ಸರ್. ಶೇಷಾದ್ರಿ ಅಯ್ಯರ್ ಅವರ ನೆನಪಿನಲ್ಲಿ ನಿರ್ಮಾಣವಾಗಿದೆ.

1914 ರಲ್ಲಿ ಸ್ಮಾರಕ ಸಮಿತಿಯು ಸ್ಮಾರಕವು ಸಾರ್ವಜನಿಕ ಕಟ್ಟಡವಾಗಿ ಹಾಗೂ ಇಲ್ಲಿ ಗ್ರಂಥಾಲಯ ನಿರ್ಮಾಣ ಮಾಡಲು ತೀರ್ಮಾನಿಸಿತು.

ದಿವಾನ್ ಸರ್. ಎಂ. ವಿಶ್ವೇಶ್ವರಯ್ಯರವರು ಈ ಭವನವನ್ನು ರಾಜ್ಯ ಸಾರ್ವಜನಿಕ ಗ್ರಂಥಾಲಯಕ್ಕೆ ಹಸ್ತಾಂತರಿಸಿದ ನಂತರ ಅಂದರೆ ದಿನಾಂಕ 01-05-1915 ರಲ್ಲಿ ಸಾರ್ವಜನಿಕ ಗ್ರಂಥಾಲಯ ಪ್ರಾರಂಭವಾಯಿತು.

ಈ ಗ್ರಂಥಾಲಯದ ಆಡಳಿತವನ್ನು ಮೈಸೂರು ನೋಂದಣಿ ಕಾಯಿದೆ ಅಡಿಯಲ್ಲಿ ಬರುವ ಆಡಳಿತ ಸಮಿತಿಯು ನಡೆಸುತ್ತಿತ್ತು. ಶಿಕ್ಷಣ ಇಲಾಖೆಯ ಮಹಾನಿರೀಕ್ಷರಾಗಿದ್ದ ಕೃಷ್ಣರಾವ್ ರವರು ಇದರ ಮೊದಲ ಅಧ್ಯಕ್ಷರಾಗಿದ್ದರು.

ಕರ್ನಾಟಕ ಸಾರ್ವಜನಿಕ ಗ್ರಂಥಾಲಯ ಕಾಯದೆ 1965 ರ ಅಡಿಯಲ್ಲಿ ಕರ್ನಾಟಕ ಸರ್ಕಾರವು ಈ ಗ್ರಂಥಾಲಯವನ್ನು 1966 ರಲ್ಲಿ ತನ್ನ ಸುಪರ್ದಿಗೆ ಪಡೆದ ನಂತರ ರಾಜ್ಯ ಕೇಂದ್ರ ಗ್ರಂಥಾಲಯವೆಂದು ಮರು ನಾಮಕರಣ ಮಾಡಲಾಯಿತು. 1-04-1986 ರಿಂದ ಪರಾಮರ್ಶನ ಗ್ರಂಥಾಲಯವಾಗಿ ಮಾರ್ಪಾಡಾಗಿದೆ.

ದಿನಾಂಕ: 23 ರಂದು ನಡೆಯುವ ಸಮಾರಂಭದಲ್ಲಿ ಬೆಂಗಳೂರು ಅಭಿವೃದ್ಧಿ ಮತ್ತು ಯೋಜನಾ ಸಚಿವ ಕೆ.ಜೆ. ಜಾರ್ಜ್, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ವಸತಿ ಸಚಿವ ಎಂ. ಕೃಷ್ಣಪ್ಪ ಕೃಷಿ ಸಚಿವ ಕೃಷ್ಣ ಬೈರೇಗೌಡ ಮೀನುಗಾರಿಕೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಹಾಗೂ ರಾಜ್ಯ ಗ್ರಂಥಾಲಯ ಪ್ರಾಧಿಕಾರ ಸದಸ್ಯರೂ ಅದ ಪ್ರಮೋದ್ ಮಧ್ವರಾಜ್, ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ಮಹಾಪೌರರಾದ ಶ್ರೀಮತಿ ಜಿ. ಪದ್ಮಾವತಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಸಮಾರಂಭದ ಅಧ್ಯಕ್ಷತೆಯನ್ನು ನಗರಾಭಿವೃದ್ಧಿ ಹಾಗೂ ಹಜ್ ಸಚಿವ ಆರ್. ರೋಷನ್ ಬೇಗ್ ಅವರು ವಹಿಸಲಿದ್ದಾರೆ.

ಈ ಸಮಾರಂಭದಲ್ಲಿ ಅನೇಕ ಗಣ್ಯರು ಸೇರಿದಂತೆ ಲೋಕಸಭಾ ಸದಸ್ಯರು, ರಾಜ್ಯ ಸದಸ್ಯರು, ಶಾಸಕರು, ವಿಧಾನ ಪರಿಷತ್ತಿನ ಸದಸ್ಯರು ಸೇರಿದಂತೆ ಅನೇಕ ಗಣ್ಯರು, ಹಿರಿಯ ಅಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ.

ಎಸ್‌ಎಂ:ಜಿಪಿಆರ್.

# ರಾಷ್ಟ್ರ-ರಾಜ್ಯ ಪ್ರಶಸ್ತಿ ಪುರಸ್ಕೃತ ಹಾಗೂ ಪನೋರಮಾ ಕನ್ನಡ ಚಿತ್ರಗಳ ಉತ್ಸವ

ಬೆಂಗಳೂರು, ಏಪ್ರಿಲ್ 22 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು "ರಾಷ್ಟ್ರ-ರಾಜ್ಯ ಪ್ರಶಸ್ತಿ ಪುರಸ್ಕೃತ ಹಾಗೂ ಪನೋರಮಾ ಚಿತ್ರೋತ್ಸವ ಆಯ್ಕೆಯಾದ ಕನ್ನಡ ಚಿತ್ರಗಳ ಉತ್ಸವವನ್ನು ಏಪ್ರಿಲ್ 25 ರಿಂದ 29 ರವರೆಗೆ ಚಾಮುಂಡೇಶ್ವರಿ ಸ್ಟುಡಿಯೋಸ್, ಮಿಲ್ಲರ್ಸ್ ರಸ್ತೆ, ಬೆಂಗಳೂರು ಇಲ್ಲಿ ಆಯೋಜಿಸಿದೆ.

ಗೃಹ ಸಚಿವ ಡಾ: ಜಿ. ಪರಮೇಶ್ವರ ಅವರು ಏಪ್ರಿಲ್ 25 ರಂದು ಸಂಜೆ 4.00 ಗಂಟೆಗೆ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಈ ಚಿತ್ರೋತ್ಸವಕ್ಕೆ ಚಾಲನೆ ನೀಡಲಿದ್ದಾರೆ.

ಮುಖ್ಯ ಅತಿಥಿಯಾಗಿ ಹಿರಿಯ ಕಲಾವಿದೆ ಡಾ: ಜಯಮಾಲಾ ಉಪಸ್ಥಿತರಿರುವರು. ಪದ್ಮಶ್ರೀ ಪುರಸ್ಕೃತ ಖ್ಯಾತ ಚಲನಚಿತ್ರ ನಿರ್ದೇಶಕ ಗಿರೀಶ್ ಕಾಸರವಳ್ಳಿ ಅವರು ಪ್ರಧಾನ ಭಾಷಣ ಮಾಡಲಿದ್ದು, ಸಮಾರಂಭದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್.ವಿ. ರಾಜೇಂದ್ರಸಿಂಗ್ ಬಾಬು ಅವರು ವಹಿಸುವರು. ಸಮಾರಂಭದ ವಿಶೇಷ ಆಹ್ವಾನಿತರಾಗಿ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸಾ.ರಾ. ಗೋವಿಂದು, 2016 ನೇ ಸಾಲಿನ ಅತ್ಯುತ್ತಮ ನಟ ಪ್ರಶಸ್ತಿ ಪುರಸ್ಕೃತ ಶ್ರೀ ಅಚ್ಯುತ್‌ಕುಮಾರ್, 2016 ನೇ ಸಾಲಿನ ಅತ್ಯುತ್ತಮ ನಟಿ ಪ್ರಶಸ್ತಿ ಪುರಸ್ಕೃತ ಕುಮಾರಿ ಶೃತಿ ಹರಿಹರನ್ ಅವರು ಭಾಗವಹಿಸುವರು ಉದ್ಘಾಟನಾ ಸಮಾರಂಭದ ನಂತರ "ರೈಲ್ವೇ ಚಿಲ್ಡ್ರನ್" ಚಿತ್ರ ಹಾಗೂ ಕಿರುಚಿತ್ರ "ಅನಲ" ಪ್ರದರ್ಶನಗೊಳ್ಳಲಿವೆ.

<u>ಪ್ರದರ್ಶನಗೊಳ್ಳುವ ಚಿತ್ರಗಳು:</u>

ಏಪ್ರಿಲ್ 26 ರಂದು ಬೆಳಿಗ್ಗೆ 11-00 ಗಂಟೆಗೆ "ರಿಸರ್ವೇಶನ್" ಮಧ್ಯಾಹ್ನ 2-30 ಗಂಟೆಗೆ "ಮದಿಪು", ಸಂಜೆ 5-00 ಗಂಟೆಗೆ "ಅಮರಾವತಿ" ಚಲನಚಿತ್ರ ಪ್ರದರ್ಶನ ಏರ್ಪಡಿಸಲಾಗಿದೆ.

ಏಪ್ರಿಲ್ 27 ರಂದು ಬೆಳಿಗ್ಗೆ 11-00 ಗಂಟೆಗೆ "ಜೀರ್‌ಜಿಂಬೆ", ಮಧ್ಯಾಹ್ನ 2-30 ಗಂಟೆಗೆ "ರಾಮ ರಾಮಾ ರೇ", ಸಂಜೆ 5-00 ಗಂಟೆಗೆ "ಅಂತರ್ಜಲ" ಚಲನಚಿತ್ರ ಪ್ರದರ್ಶನ ಏರ್ಪಡಿಸಲಾಗಿದೆ.

ಏಪ್ರಿಲ್ 28 ರಂದು ಬೆಳಿಗ್ಗೆ 11-00 ಗಂಟೆಗೆ "ಅಲ್ಲಮ", ಮಧ್ಯಾಹ್ನ 2-30 ಗಂಟೆಗೆ "ಹರಿಕಥಾ ಪ್ರಸಂಗ", ಸಂಜೆ 5-00 ಗಂಟೆಗೆ "ಮೂಡ್ಲ ಸೀಮೆಯಲಿ" ಚಲನಚಿತ್ರ ಪ್ರದರ್ಶನ ಏರ್ಪಡಿಸಲಾಗಿದೆ.

ಏಪ್ರಿಲ್ 29 ರಂದು ಮಧ್ಯಾಹ್ನ 2-30 ಗಂಟೆಗೆ "ಯು ಟರ್ನ್", ಸಂಜೆ 5-00 ಗಂಟೆಗೆ "ಕಿರಿಕ್ ಪಾರ್ಟಿ" ಚಲನಚಿತ್ರ ಪ್ರದರ್ಶನ ಏರ್ಪಡಿಸಲಾಗಿದೆ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿ ರಿಜಿಸ್ಟ್ರಾರ್ ಹೆಚ್.ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಂಎಸ್/ಕೆಎಂ

# ರಾಜ್ಯ ಚಲನಚಿತ್ರ ಪ್ರಶಸ್ತಿ ಹಿನ್ನೋಟ

ಬೆಂಗಳೂರು, ಏಪ್ರಿಲ್ 22 (ಕರ್ನಾಟಕ ವಾರ್ತೆ)

ರಾಜಧಾನಿಯಿಂದ ರಾಜ್ಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭ ಮೊದಲಬಾರಿಗೆ ರಾಜ್ಯದ ಹೊರಗೆ 1985 ರಲ್ಲಿ ಕೋಲಾರದಲ್ಲಿ ಆಯೋಜಿಸಲಾಯಿತು. ನಂತರ ಅರಮನೆ ನಗರಿ ಮೈಸೂರು, ಪ್ರಕೃತಿ ಸೊಬಗಿನ ಮಡಿಕೇರಿ, ಗೋಲಗುಂಬಜ್ ಖ್ಯಾತಿಯ ವಿಜಯಪುರ, ಕುಂದ ನಗರಿ ಬೆಳಗಾವಿ, ಸಹ್ಯಾದ್ರಿ ತಪ್ಪಲಿನ ಶಿವಮೊಗ್ಗ, ಧಾರವಾಡ, ರಾಮನಗರ ಹೀಗೆ ರಾಜ್ಯದ ಹಲವು ಜಿಲ್ಲಾ ಕೇಂದ್ರಗಳಲ್ಲೂ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭ ನಡೆದಿವೆ.

ಕನ್ನಡ ಚಿತ್ರರಂಗಕ್ಕೆ ಅಪೂರ್ವ ಕೊಡುಗೆ ನೀಡಿದ ಕಲಾವಿದರನ್ನು ಗುರುತಿಸಿ ಗೌರವಿಸಲು ಕನ್ನಡ ಚಿತ್ರರಂಗದ ಬೆಳವಣಿಗೆಗೆ ಕಾರಣರಾದ ಡಾ: ರಾಜ್‌ಕುಮಾರ್, ಪುಟ್ಟಣ್ಣ ಕಣಗಾಲ್, ವಿಷ್ಣುವರ್ಧನ್, ಕೆ.ಎಸ್. ಅಶ್ವಥ್ ಅವರ ಹೆಸರಿನಲ್ಲಿ ಪ್ರತಿ ವರ್ಷ ಗಣ್ಯರಿಗೆ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗುತ್ತಿದೆ.

ಚಿತ್ರರಂಗಕ್ಕೆ ಅಪೂರ್ವ ಕೊಡುಗೆ ನೀಡಿದ ನಿರ್ದೇಶಕರಿಗೆ 1986-87 ನೇ ಸಾಲಿನಿಂದ ಪುಟ್ಟಣ್ಣ ಕಣಗಾಲ್ ಪ್ರಶಸ್ತಿ ನೀಡಲಾಗುತ್ತಿದೆ. ಖ್ಯಾತ ನಿರ್ದೇಶಕ ಹುಣಸೂರು ಕೃಷ್ಣಮೂರ್ತಿ

ಅವರು ಈ ಪ್ರಶಸ್ತಿಗೆ ಭಾಜನರಾದ ಮೊದಲಿಗರು. ಈ ಬಾರಿ ಚಿತ್ರ ಸಾಹಿತಿ ಹಾಗೂ ನಿರ್ದೇಶಕ ಕೆ.ವಿ. ರಾಜು ಈ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಕನ್ನಡ ಚಿತ್ರರಂಗದ ಸಮಗ್ರ ಬೆಳವಣಿಗೆಗೆ ಅಪೂರ್ವ ಕೊಡುಗೆ ನೀಡಿದ ಗಣ್ಯರನ್ನು ಗೌರವಿಸಲು **1993–94** ರಲ್ಲಿ ಡಾ: ರಾಜ್‌ಕುಮಾರ್ ಪ್ರಶಸ್ತಿ ಸ್ಥಾಪಿಸಲಾಯಿತು. ಮೊದಲ ಡಾ: ರಾಜ್‌ಕುಮಾರ್ ಪ್ರಶಸ್ತಿ ಪಡೆದ ಹೆಗ್ಗಳಿಕೆ ಖ್ಯಾತ ನಟ ಕೆ.ಎಸ್. ಅಶ್ವಥ್ ಅವರದ್ದು. ಈ ಬಾರಿ ಹಿರಿಯ ಕಲಾವಿದೆ ಅದವಾನಿ ಲಕ್ಷ್ಮೀದೇವಿ ಅವರು ಈ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಕನ್ನಡ ಚಿತ್ರರಂಗದ ವಿವಿಧ ವಲಯಗಳಲ್ಲಿ ಅಪೂರ್ವ ಸಾಧನೆ ಮಾಡಿದ ಹಿರಿಯ ಚೇತನಗಳಿಗೆ ಡಾ: ವಿಷ್ಣುವರ್ಧನ್ ಪ್ರಶಸ್ತಿಯನ್ನು **2001–02** ರಿಂದ ನೀಡಲಾಗುತ್ತಿದೆ. ಮೊದಲ ಪ್ರಶಸ್ತಿಯ ಗೌರವ ಹಿರಿಯ ನಟ ರಾಜಾನಂದ ಅವರದ್ದಾಗಿದೆ. ಈ ಬಾರಿ ಹಿರಿಯ ಬ್ಯಾನರ್ ಕಲಾವಿದ ಕೆ. ಚಿನ್ನಪ್ಪ ಆಯ್ಕೆಯಾಗಿದ್ದಾರೆ.

ಎಂಎಸ್/ಕೆಎಂ

## ರಾಜ್ಯದ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ದೇಶಕ್ಕೇ ಮಾದರಿ:

## ಅಭಿವೃದ್ಧಿ ಆಯುಕ್ತ ಟಿ.ಎಂ. ವಿಜಯಭಾಸ್ಕರ್

ಬೆಂಗಳೂರು ಏಪ್ರಿಲ್ 22 (ಕರ್ನಾಟಕ ವಾರ್ತೆ)

ದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರಗಳಲ್ಲಿ ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ಯುವ ತಜ್ಞರನ್ನೊಳಗೊಂಡಿರುವ ಮಾದರಿ ಕೇಂದ್ರವಾಗಿದೆ. ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಂಚೂಣಿಯಲ್ಲಿರುವ ಈ ಕೇಂದ್ರದ ಕಾರ್ಯಚಟುವಟಿಕೆಗಳ ಅಧ್ಯಯನ ಮಾಡಲು ವಿದೇಶಿ ಹವಾಮಾನ ತಜ್ಞರು ಹಾಗೂ ಸಂಶೋಧನಾ ವಿದ್ಯಾರ್ಥಿಗಳು ಭೇಟಿ ನೀಡುತ್ತಾರೆಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರಾದ ಟಿ.ಎಂ. ವಿಜಯಭಾಸ್ಕರ್ ತಿಳಿಸಿದರು

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರವು ಕರ್ನಾಟಕ ಮಾಧ್ಯಮ ಅಕಾಡೆಮಿಯ ಸಹಯೋಗದೊಂದಿಗೆ ಯಲಹಂಕದ ಕೆ.ಎಸ್.ಎನ್.ಡಿ.ಎಂ.ಸಿ. ಸಭಾಂಗಣದಲ್ಲಿಂದು ಪತ್ರಕರ್ತರಿಗಾಗಿ ಏರ್ಪಡಿಸಲಾಗಿದ್ದ "ಹವಾಮಾನ ಮಾಹಿತಿ ಸಂವಹನೆ ಮಾಧ್ಯಮದ ಪಾತ್ರ" ವಿಷಯ ಕುರಿತ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ರಾಜ್ಯದಲ್ಲಿ **6000** ಮಳೆ ಮಾಪನ ಕೇಂದ್ರ, **900** ಹವಾಮಾನ ಮಾಪನ ಕೇಂದ್ರ **14,** ಭೂಕಂಪ ಮಾಪನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದರು.

ರಾಜ್ಯದ ಆರು ಸಾವಿರ ಗ್ರಾಮ ಪಂಚಾಯತಿಗಳಲ್ಲಿ ನಿರ್ಮಿಸಲಾಗಿರುವ ಸ್ವಯಂಚಾಲಿತ ಮಳೆ ಮಾಪನ ಕೇಂದ್ರವು ಪ್ರತಿ 15 ನಿಮಿಷಕ್ಕೊಮ್ಮೆ ಮಳೆ ಹಾಗೂ ಹವಾಮಾನದ ಬಗ್ಗೆ ತಿಳಿಸುತ್ತದೆ. ಮುಂದಿನ 24 ಗಂಟೆಗಳಲ್ಲಿ ಆಗುವ ಮಳೆಯ ಬಗ್ಗೆ ಮಾಹಿತಿ ನೀಡಲು ರಾಜ್ಯದ 10 ಲಕ್ಷ ರೈತರಿಗೆ ಎಸ್‌ಎಂಎಸ್ ಮೂಲಕ ಮಳೆ ಮತ್ತು ಹವಾಮಾನ ಆಧಾರಿತ ಕೃಷಿ ಬಗ್ಗೆ ಮಾಹಿತಿ ನೀಡಲಾಗುತ್ತಿದೆ ಎಂದರು.

ಕೇಂದ್ರ ನಿರ್ದೇಶಕ ಡಾ. ಜಿ.ಎಸ್. ಶ್ರೀನಿವಾಸ ರೆಡ್ಡಿ ಅವರು ಮಾತನಾಡಿ ಬೆಂಗಳೂರು ನಗರದ ತಾಪಮಾನದ ಬಗ್ಗೆ ಬಿಬಿಎಂಪಿ ಹಾಗೂ ಸ್ಥಳೀಯರಿಗೆ ಮಾಹಿತಿ ಒದಗಿಸುವ ಸಲುವಾಗಿ ಎರಡು ವಾರ್ಡ್‌ಗಳಿಗೆ ಒಂದರಂತೆ ಒಟ್ಟು 100 ಮಳೆಮಾಪನ ಕೇಂದ್ರ ಹಾಗೂ 10 ಹವಾಮಾನ ಮಾಪನ ಕೇಂದ್ರ ಸ್ಥಾಪಿಸಲಾಗಿದೆ. ಆ ಮೂಲಕ ನಗರದಲ್ಲಿ ಮಳೆಯಾದಾಗ ಕೆಲಪ್ರದೇಶಗಳಲ್ಲಿ ಉಂಟಾಗುವ ಪ್ರವಾಹ ಕುರಿತು ಬಿಬಿಎಂಪಿ ಮುನ್ಸೂಚನೆ ನೀಡಲಾಗುತ್ತಿದೆ ಎಂದರು.

ರಾಜ್ಯ ಮಾಧ್ಯಮ ಅಕಾಡೆಮಿಯು ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಮತ್ತು ಪತ್ರಕರ್ತರಿಗಾಗಿ ವಿನೂತನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬಂದಿದೆ. ಅದರಂತೆ ಈ ಕಾರ್ಯಾಗಾರವು ಪ್ರವಾಹ, ಬರ ಪರಿಸ್ಥಿತಿ ಕುರಿತು ಪತ್ರಕರ್ತರು ಹೇಗೆ ವರದಿ ಮಾಡಬೇಕೆಂದು ಜ್ಞಾನ ಬೆಳೆಸುತ್ತದೆ ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷ ಎಂ. ಸಿದ್ದರಾಜು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಡಾ: ಆರ್.ವಿ. ಶರ್ಮ, ಡಾ: ಸಿ.ಎನ್. ಪ್ರಭು, ಎಸ್.ಎನ್. ಗವಾಸ್ಕರ್ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದರು.

## ಗೆಜೆಟೆಡ್ ಪ್ರೊಬೆಷನರ್ಸ್ ಆಯ್ಕೆ ಪಟ್ಟಿ ಪ್ರಕಟ

ಬೆಂಗಳೂರು ಏಪ್ರಿಲ್ 22 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು 2014 ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್ 464 (374+90) ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಆಯ್ಕೆಪಟ್ಟಿಯನ್ನು ಆಯೋಗದ ವೆಬ್‌ಸೈಟ್ ನಲ್ಲಿ ಪ್ರಕಟಿಸಿದೆ. ಅಭ್ಯರ್ಥಿಗಳು ಆಕ್ಷೇಪಣೆಗಳಿದ್ದಲ್ಲಿ ಈ ಆಯ್ಕೆಪಟ್ಟಿ ಪ್ರಕಟಗೊಂಡ 30 ದಿನಗಳೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು –1 ಇವರಿಗೆ ಸಲ್ಲಿಸಬಹುದು.

# ಶೂನ್ಯ ನೆರಳಿನ ಮಧ್ಯಾಹ್ನ

ಬೆಂಗಳೂರು ಏಪ್ರಿಲ್ 22 (ಕರ್ನಾಟಕ ವಾರ್ತೆ)

**ಬೆಂಗಳೂರಿನಲ್ಲಿ ಏಪ್ರಿಲ್ 25 ರಂದು ಸೂರ್ಯ ನೆತ್ತಿಯ ಮೇಲೆ ಸರಿಯಾಗಿ ಹಾದು ಹೋಗುತ್ತದೆ. ಅಂದು ಮಾತ್ರ ಮಧ್ಯಾಹ್ನ ನೆರಳು ಶೂನ್ಯವಾಗಿರುತ್ತದೆ. ಇದನ್ನು ಪ್ರಾತ್ಯಕ್ಷಿಕೆಗಳ ಮೂಲಕ ಜವಾಹರಲಾಲ್ ನೆಹರೂ ತಾರಾಲಯದಲ್ಲಿ 12.17 ಕ್ಕೆ ನಿರೂಪಿಸಲಾಗುತ್ತದೆ. ಆ ದಿನ ಮಧ್ಯಾಹ್ನ ಯಾವುದೇ ಕಂಬಕ್ಕೆ ನೆರಳು ಇಲ್ಲದಂತಾಗುವುದನ್ನು ವೀಕ್ಷಿಸಬಹುದು. ಯಾವುದೇ ವಿಶೇಷ ಉಪಕರಣ ಬೇಕಿಲ್ಲ.**

**ಉತ್ತರಕ್ಕೆ ಚಲಿಸುವ ಸೂರ್ಯ ಜೂನ್ 22 ರಂದು ಗರಿಷ್ಠವನ್ನು ಮುಟ್ಟುತ್ತದೆ. ಆ ಮುಂದೆ ದಕ್ಷಿಣ ದಿಕ್ಕಿಗೆ ಹಿಂದಿರುಗತ್ತದೆ. ಇದೇ ದಕ್ಷಿಣಾಯನ. ಹೀಗೆ ದಕ್ಷಿಣಕ್ಕೆ ಸಾಗುವ ಹಾದಿಯಲ್ಲಿ ಪುನ: ಬೆಂಗಳೂರಿಗೆ ನೆತ್ತಿಯ ಮೇಲೆ ಹಾದು ಹೋಗುತ್ತದೆ. ಇದು ಆಗಸ್ಟ್ 19 ರಂದು ನಡೆಯುತ್ತದೆ. ಹೀಗೆ ಎರಡು ನಿರ್ದಿಷ್ಟ ದಿನಗಳಲ್ಲಿ ಮಾತ್ರ ಮಧ್ಯಾಹ್ನದ ನೆರಳು ಇಲ್ಲವಾಗುತ್ತದೆ ಎಂದು ಬೆಂಗಳೂರಿನ ಜವಾಹರ್ ಲಾಲ್ ನೆಹರೂ ತಾರಾಲಯದ ಪ್ರಕಟಣೆ ತಿಳಿಸಿದೆ.**

## ಮಕ್ಕಳ ಕಲ್ಯಾಣ ಸಮಿತಿಗಳಿಗೆ ಸದಸ್ಯರುಗಳನ್ನು ಮತ್ತು ಬಾಲನ್ಯಾಯ ಮಂಡಳಿಗಳಿಗೆ ಸಮಾಜ ಕಾರ್ಯಕರ್ತರನ್ನು ಆಯ್ಕೆ ಮಾಡಲು ಅರ್ಜಿ ಆಹ್ವಾನ

ಬೆಂಗಳೂರು, ಏಪ್ರಿಲ್ 22 (ಕರ್ನಾಟಕ ವಾರ್ತೆ)

ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015 ಹಾಗೂ ಬಾಲನ್ಯಾಯ ಮಾದರಿ ನಿಯಮ 2016 ರನ್ವಯ ಮಕ್ಕಳ ಕಲ್ಯಾಣ ಸಮಿತಿಗಳು ಮತ್ತು ಬಾಲನ್ಯಾಯ ಮಂಡಳಿಗಳಿಗೆ 2017 ರಿಂದ 2020 ರವರೆಗೆ 3 ವರ್ಷಗಳ ಕಾಲಾವಧಿಗಾಗಿ ಸದಸ್ಯತ್ವಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. **ಅರ್ಜಿ ನಮೂನೆ, ಸೂಚನೆಗಳು, ವಿಶೇಷ ಸೂಚನೆಗಳು, ದೃಢೀಕರಣಗಳು** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ **ವೆಬ್‌ಸೈಟ್ www.dwcdkar.gov.in** ನಲ್ಲಿ ಲಭ್ಯವಿರುತ್ತದೆ. **ಮಕ್ಕಳ ಕಲ್ಯಾಣ ಸಮಿತಿ ಮತ್ತು ಬಾಲನ್ಯಾಯ ಮಂಡಳಿಗಳಿಗೆ ಪ್ರತ್ಯೇಕ ಅರ್ಜಿಗಳನ್ನು ಸಲ್ಲಿಸುವುದು.** ಭರ್ತಿ ಮಾಡಿದ ಅರ್ಜಿಗಳನ್ನು ನೋಂದಾಯಿತ ಅಂಚೆ ಮೂಲಕ ಅಥವಾ ಮುದ್ದಾಂ ದಿನಾಂಕ:15-05-2017 ರಂದು ಸಂಜೆ 5-30ರ ಒಳಗೆ **ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ**

**ಸೊಸೈಟಿ, ಕೇರಾಫ್, ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮೊದಲನೇ ಮಹಡಿ, ಬಹುಮಹಡಿಗಳ ಕಟ್ಟಡ, ಡಾ॥ ಬಿ.ಆರ್, ಅಂಬೇಡ್ಕರ್ ವೀಧಿ, ಬೆಂಗಳೂರು – 560001** ಇವರಿಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಹಾಗೂ ಅರ್ಜಿ ನಮೂನೆಗಾಗಿ (ಅರ್ಜಿ ನಮೂನೆಯು 4 ಪುಟ ಒಳಗೊಂಡಿದೆ) ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು ದೂರವಾಣಿ:**080–22879381/82** ಹಾಗೂ ಆಯಾ ಜಿಲ್ಲೆಯ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಛೇರಿಯನ್ನು ಸಂಪರ್ಕಿಸಬಹುದು (ವಿವರಗಳು ಇಲಾಖೆಯ ವೆಬ್‌ಸೈಟ್ **www.dwcdkar.gov.in** ನಲ್ಲಿ ಲಭ್ಯವಿರುತ್ತದೆ) ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಮಹಿಳಾ ಸಬಲೀಕರಣ ಕಾರ್ಯನೀತಿ ಕರಡು ಕುರಿತು ಚರ್ಚಿಸಲು ರಾಜ್ಯಮಟ್ಟದ ಸಭೆ

ಬೆಂಗಳೂರು, ಏಪ್ರಿಲ್ 22 (ಕರ್ನಾಟಕ ವಾರ್ತೆ)

**ಮಹಿಳಾ ಸಬಲೀಕರಣ ಕಾರ್ಯನೀತಿ 2017 ರ ಕುರಿತು ಚರ್ಚಿಸಲು ಏಪ್ರಿಲ್ 24 ರಂದು ರಾಜ್ಯ ಮಟ್ಟದ ಸಭೆಯು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಶ್ರೀಮತಿ ಉಮಾಶ್ರೀ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ.**

**ವಿಕಾಸ ಸೌಧದಲ್ಲಿ ಬೆಳಿಗ್ಗೆ 11–00 ಗಂಟೆಗೆ ನಡೆಯಲಿರುವ ಈ ಸಭೆಯಲ್ಲಿ ವಿವಿಧ ವಲಯಗಳ ಗಣ್ಯರು, ಮಹಿಳಾ ಸಬಲೀಕರಣ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘಸಂಸ್ಥೆಗಳ ಪ್ರತಿನಿಧಿಗಳು ವಿವಿಧ ಕಾಲೇಜುಗಳ ಪ್ರಾಧ್ಯಾಪಕರು, ಸಂಶೋಧನಾ ವಿದ್ಯಾರ್ಥಿಗಳು, ಮಹಿಳೆಯರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಪಾಲ್ಗೊಳ್ಳಲಿದ್ದಾರೆಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**